DFA/591556

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1565
ಸದಸ್ಯರ ಹೆಸರು : ಹೆಚ್.ಎಂ. ರಮೇಶ್ ಗೌಡ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 11.03.2022.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಸೇವಾ ವಲಯವಾಗಿರುವ ಸಾರಿಗೆ ಇಲಾಖೆಯ ನಷ್ಟವನ್ನು ಭರಿಸಲು ಸರ್ಕಾರ ಇಲಾಖೆಗೆ ಧನ ಸಹಾಯ ನೀಡಿದೆಯೇ; ನೀಡಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು; | ರಾಜ್ಯದ ನಾಲ್ಕೂ ಸಾರಿಗೆ ಸಂಸ್ಥೆಗಳು ಕೋವಿಡ್-19ರ ಹಿನ್ನೆಲೆಯಲ್ಲಿ ಅನುಭವಿಸಿದ ನಷ್ಟವನ್ನು ಭರಿಸಲು, ಸಂಸ್ಥೆಗಳ ಅಧಿಕಾರಿ/ ಸಿಬ್ಬಂದಿಗಳ ವೇತನ ವೆಚ್ಚಕ್ಕಾಗಿ ಬಿಡುಗಡೆ ಮಾಡಿರುವ ಸಹಾಯಧನದ ವಿವರ ಈ ಕೆಳಕಂಡಂತಿದೆ: (see table below) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ 2021-22ನೇ ಸಾಲಿನಲ್ಲಿ ಸಂಸ್ಥೆಯು ಬಾಕಿ ಉಳಿಸಿಕೊಂಡಿದ್ದ ಹೊಣೆಗಾರಿಕೆಯನ್ನು ತೀರುವಳಿ ಮಾಡಲು ರೂ.400.00 ಕೋಟಿಗಳ ಧನ ಸಹಾಯವನ್ನು ಬಿಡುಗಡೆ ಮಾಡಿದೆ. |
| ಆ. | ನಿಗದಿತ ಅವಧಿಯಲ್ಲಿ ಸಾರಿಗೆ ನೌಕರರ ವೇತನ ಪರಿಷ್ಕರಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮಗಳನ್ನು | ಸರ್ಕಾರದ ಗಮನಕ್ಕೆ ಬಂದಿದೆ.<br>ರಾಜ್ಯ ರಸ್ತೆ ಸಾರಿಗೆ ನೌಕರರ ವೇತನವನ್ನು ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಪರಿಷ್ಕರಿಸುವ ಪದ್ಧತಿ ಜಾರಿಯಲ್ಲಿದೆ ಮತ್ತು ದಿನಾಂಕ.01.01.2020ರಿಂದ ವೇತನ ಪರಿಷ್ಕರಣೆ ಆಗಬೇಕಾಗಿದ್ದು, ಕೋವಿಡ್-19ರ ಹಿನ್ನೆಲೆಯಲ್ಲಿ ನಿಗಮಗಳು ಅನುಭವಿಸುತ್ತಿರುವ ಆರ್ಥಿಕ ಸಂಕಷ್ಟದ ಹಿನ್ನಲೆಯಲ್ಲಿ, ವೇತನ |

| ನಿಗಮ | ವೇತನ ವೆಚ್ಚಕ್ಕಾಗಿ ಬಿಡುಗಡೆ ಮಾಡಿರುವ ಅನುದಾನ | |
|---|---|---|
| | 2020-21 | 2021-22 |
| ಕ.ರಾ.ರ.ಸಾ.ನಿಗಮ | 56355.00 | 23586.00 |
| ಬೆಂ.ಮ.ಸಾ.ಸಂಸ್ಥೆ | 69055.00 | 43005.00 |
| ವಾ.ಕ.ರ.ಸಾ.ಸಂಸ್ಥೆ | 36941.00 | 20804.00 |
| ಕ.ಕ.ರ.ಸಾ.ನಿಗಮ | 32989.00 | 13414.00 |
| ಒಟ್ಟು | **195340.00** | **100809.00** |



Generated from eOffice by B SREERAMULU, TD-MIN(BS), TRANSPORT MINISTER, Trans on 10/03/2022 08:40 PM

| | | |
|---|---|---|
| | ಕೈಗೊಳ್ಳಲಾಗಿದೆ; | ಪರಿಷ್ಕರಣೆ ಬೇಡಿಕೆಯ ಕುರಿತು ಆರ್ಥಿಕ ಪರಿಸ್ಥಿತಿಯನ್ನು ಪರಿಶೀಲಿಸಿ ಸೂಕ್ತ ತೀರ್ಮಾನವನ್ನು ತೆಗೆದುಕೊಳ್ಳಲಾಗುವುದು. |
| ಇ. | ಸಾರಿಗೆ ನಿಗಮಗಳನ್ನು ವಿಲೀನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ, ಯಾವಾಗ ವಿಲೀನ ಮಾಡಲಾಗುವುದು? | ಪ್ರಸ್ತುತ ಸಾರಿಗೆ ನಿಗಮಗಳನ್ನು ವಿಲೀನ ಮಾಡುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಟಿಡಿ 75 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು



Generated from eOffice by B SREERAMULU, TD-MIN(BS), TRANSPORT MINISTER, Trans on 10/03/2022 08:40 PM